ನಮ್ಮ ವಿರುದ್ಧ ಆಯುಧ ಎತ್ತಿದವನು ನಮ್ಮಲ್ಲಿ ಸೇರಿದವನಲ್ಲ

ಅಬೂ ಮೂಸಾ ಅಶ್ಅರಿ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಪ್ರವಾದಿಯವರು (ಅವರ
ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ನಮ್ಮ ವಿರುದ್ಧ ಆಯುಧ ಎತ್ತಿದವನು ನಮ್ಮಲ್ಲಿ ಸೇರಿದವನಲ್ಲ."
[صحيح] [متفق عليه]

ಇಲ್ಲಿ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಎಚ್ಚರಿಸುವುದೇನೆಂದರೆ, ಮುಸಲ್ಮಾನರನ್ನು ಹೆದರಿಸಲು, ಅಥವಾ ದೋಚಲು, ಅವರ ವಿರುದ್ಧ ಆಯುಧ ಎತ್ತುವವರು, ಯಾರು ಅನ್ಯಾಯವಾಗಿ ಇಂತಹ ಕೃತ್ಯಗಳನ್ನು ಮಾಡುತ್ತಾರೋ ಅವರು ಮಹಾ ಅಪರಾಧವನ್ನು ಮತ್ತು ಮಹಾ ಪಾಪವನ್ನು ಮಾಡುತ್ತಿದ್ದಾರೆ. ಅವರು ಈ ಉಗ್ರ ಎಚ್ಚರಿಕೆಗೆ ಅರ್ಹರಾಗುತ್ತಾರೆ.

https://sunnah.global/hadeeth/kn/show/2997